# ಕರ್ನಾಟಕ ಸರ್ಕಾರ

ಸಂಖ್ಯೆ:ಇಡಿ 550 ಎಲ್‌ಐಬಿ 2011

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 09.01.2012

## ಸುತ್ತೋಲೆ

ವಿಷಯ: 2012ರ ಜನವರಿ 12 ರಿಂದ 16 ರವರೆಗೆ ಸ್ವಾಮಿ ವಿವೇಕಾನಂದರ 150ನೇ ಜಯಂತೋತ್ಸವ ಆಚರಿಸುವ ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಇಡಿ 550 ಎಲ್ ಐಬಿ 2011, ದಿನಾಂಕ:05.12.2011

-=-

ಸ್ವಾಮಿ ವಿವೇಕಾನಂದರವರ 150ನೇ ಜಯಂತೋತ್ಸವ ಆಚರಣೆ ಪ್ರಯುಕ್ತ ಹಮ್ಮಿಕೊಂಡ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವ ಕುರಿತು ಉಲ್ಲೇಖಿತ ಸರ್ಕಾರದ ಆದೇಶದನ್ವಯ ಶ್ರೀ ಸುರೇಶ್ ಕುಮಾರ್.ಎಸ್. ಮಾನ್ಯ ಕಾನೂನು, ಮಾನವ ಹಕ್ಕುಗಳು ಮತ್ತು ನಗರಾಭಿವೃದ್ಧಿ ಸಚಿವರ ಅಧ್ಯಕ್ಷತೆಯಲ್ಲಿ ರಾಜ್ಯಮಟ್ಟದ ಸಮಿತಿಯನ್ನು ರಚಿಸಲಾಗಿದೆ. ಸದರಿ ಸಮಿತಿಯು ದಿನಾಂಕ:2.1.2012 ರಂದು ಸಭೆ ಸೇರಿ ಸ್ವಾಮಿ ವಿವೇಕಾನಂದರ 150ನೇ ಜಯಂತೋತ್ಸವದ ಪ್ರಯುಕ್ತ 2012ನೇ ಜನವರಿ 12 ರಿಂದ 16 ರವರೆಗೆ ಮಂಗಳೂರಿನಲ್ಲಿ ರಾಷ್ಟ್ರಮಟ್ಟದ ಯುವಜನೋತ್ಸವ ಜರುಗಲಿರುವ ಬಗ್ಗೆ ಪ್ರಸ್ತಾಪಿಸಿ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಸದರಿ ಜಯಂತೋತ್ಸವವನ್ನು ಆಚರಿಸುವ ಬಗ್ಗೆ ತೀರ್ಮಾನಿಸಿತು.

ಮೇಲೆ ವಿವರಿಸಿದಂತೆ, ಕಾಲಾವಕಾಶ ಕಡಿಮೆ ಇರುವ ಕಾರಣ 2012ರ ಜನವರಿ ತಿಂಗಳಲ್ಲಿ ಯುವಜನ ಸೇವಾ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ನೇತೃತ್ವದಲ್ಲಿ ಲಭ್ಯವಿರುವ ರಾಮಕೃಷ್ಣ ಆಶ್ರಮ/ಮಠದ ಸಹಕಾರದೊಂದಿಗೆ ಯುವಜನ ಸೇವಾ ಇಲಾಖೆಯ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ, ಪದವಿ ಪೂರ್ವಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಚೇರಿಯಲ್ಲಿ / ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಚೇರಿಗಳಲ್ಲಿ ಸಂಬಂಧಪಟ್ಟ ಸ್ಥಳೀಯ ಗಣ್ಯರ ಸಹಭಾಗಿತ್ವದೊಂದಿಗೆ ಈ ಮಹಾನ್ ಚೇತನದ 150ನೇ ಜಯಂತೋತ್ಸವವನ್ನು ಅತ್ಯಂತ ಶ್ರದ್ಧೆ ಹಾಗೂ ಭಾವಪೂರ್ಣವಾಗಿ ಆಚರಿಸಬೇಕೆಂದು ಈ ಮೂಲಕ ಕೋರಲಾಗಿದೆ.

(ಜಿ. ಕುಮಾರ ನಾಯಕ)
ಸರ್ಕಾರದ ಕಾರ್ಯದರ್ಶಿ
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆ
ಹಾಗೂ ಸದಸ್ಯಕಾರ್ಯದರ್ಶಿ, ರಾಜ್ಯಮಟ್ಟದ ಸಮಿತಿ

ಗೆ:

1)ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಯುವಜನ ಮತ್ತು ಸೇವಾ ಮತ್ತು ಕ್ರೀಡಾ ಇಲಾಖೆ
{ ಎಲ್ಲಾ ಜಿಲ್ಲಾ ಕೇಂದ್ರದ ಅಧಿಕಾರಿಗಳಿಗೆ ಈ ಕುರಿತು ಸೂಚನೆ ನೀಡಲು ಕೋರಿದೆ}
2) ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು { ಈ ಕುರಿತು
3) ನಿರ್ದೇಶಕರು, ಪದವಿಪೂರ್ವ ಶಿಕ್ಷಣ ಇಲಾಖೆ, ಮಲ್ಲೇಶ್ವರಂ,ಬೆಂಗಳೂರು.{ ಸಂಬಂಧಪಟ್ಟ
4) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ { ಉಪನಿರ್ದೇಶಕರುಗಳಿಗೆ
5) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲಬರ್ಗಾ { ಸೂಕ್ತ ಸೂಚನೆ ನೀಡಲು ಕೋರಿದೆ }
6) ಎಲ್ಲಾ ಉಪನಿರ್ದೇಶಕರುಗಳು, ಸಾರ್ವಜನಿಕ ಶಿಕ್ಷಣ ಇಲಾಖೆ/ಪದವಿ ಪೂರ್ವ ಶಿಕ್ಷಣ ಇಲಾಖೆ
7) ಸರ್ಕಾರದ ಉಪ ಕಾರ್ಯದರ್ಶಿ, ಯುವಜನಸೇವಾ ಮತ್ತು ಕ್ರೀಡಾ ಇಲಾಖೆ

ಪ್ರತಿ:

1) ಮಾನ್ಯ ಕಾನೂನು, ಮಾನವ ಹಕ್ಕುಗಳು ಮತ್ತು ನಗರಾಭಿವೃದ್ಧಿ ಸಚಿವರ ಆಪ್ತಕಾರ್ಯದರ್ಶಿ
2) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತಕಾರ್ಯದರ್ಶಿ
3) ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರ ಆಪ್ತಕಾರ್ಯದರ್ಶಿ
4) ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಸಚಿವರು ಹಾಗೂ ಸಣ್ಣ ನೀರಾವರಿ ಸಚಿವರ ಆಪ್ತಕಾರ್ಯದರ್ಶಿ.
5) ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು
6)ರಾಜ್ಯ ಮಟ್ಟದ ಸಮಿತಿಯ ಎಲ್ಲಾ ಸದಸ್ಯರುಗಳು
7)ಸ್ವಾಮಿ ಶ್ರೀ ಮುಕ್ತಿದಾನಂದರವರು, ಶ್ರೀ ರಾಮಕೃಷ್ಣ ಆಶ್ರಮ, ಮೈಸೂರು.
8) ಶ್ರೀ ನಿರ್ಭಯಾನಂದ ಸ್ವಾಮೀಜಿ, ಶ್ರೀ ರಾಮಕೃಷ್ಣಮಠ, ಗದಗ 9) ಹೆಚ್ಚುವರಿ ಪ್ರತಿ

<u>ಕರ್ನಾಟಕ ಸರ್ಕಾರ</u>

ಸಂಖ್ಯೆ: ಇಡಿ 550 ಎಲ್‌ಐಬಿ 2011

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 10.01.2012

ಇವರಿಂದ
ಸರ್ಕಾರದ ಕಾರ್ಯದರ್ಶಿ
{ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ}
ಶಿಕ್ಷಣ ಇಲಾಖೆ

**<u>ಜರೂರು</u>**

ಗೆ:
ಎಲ್ಲಾ ಜಿಲ್ಲಾಧಿಕಾರಿಗಳು
ಮತ್ತು
ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಹಣಾಧಿಕಾರಿಗಳು

ಮಾನ್ಯರೆ

ವಿಷಯ: 2012ರ ಜನವರಿ 12 ರಿಂದ 16 ರವರೆಗೆ ಸ್ವಾಮಿ ವಿವೇಕಾನಂದರ 150ನೇ ಜಯಂತಿಯನ್ನು ಆಚರಿಸುವ ಕುರಿತು.

ಉಲ್ಲೇಖ: ದಿನಾಂಕ:09.01.2012 ರ ಸುತ್ತೋಲೆ ಸಂಖ್ಯೆ: ಇಡಿ 550 ಎಲ್‌ಐಬಿ 2011

-=-

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಉಲ್ಲೇಖಿತ ಸರ್ಕಾರದ ಸುತ್ತೋಲೆಯತ್ತ ನಿಮ್ಮ ಗಮನವನ್ನು ಸೆಳೆಯಲಾಗಿದೆ{ಪ್ರತಿ ಲಗತ್ತಿಸಿದೆ}. ಸದರಿ ಸುತ್ತೋಲೆಯಲ್ಲಿ ತಿಳಿಸಿರುವಂತೆ 2012ರ ಜನವರಿ ತಿಂಗಳಲ್ಲಿ ಯುವಜನ ಸೇವಾ ಇಲಾಖೆ ಹಾಗೂ ಶಿಕ್ಷಣ ಇಲಾಖೆಯ ನೇತೃತ್ವದಲ್ಲಿ ಲಭ್ಯವಿರುವ ರಾಮಕೃಷ್ಣ ಆಶ್ರಮ/ಮಠದ ಸಹಕಾರದೊಂದಿಗೆ ಯುವಜನ ಸೇವಾ ಇಲಾಖೆಯ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ, ಪದವಿ ಪೂರ್ವಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಚೇರಿಯಲ್ಲಿ / ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಚೇರಿಗಳಲ್ಲಿ ಸಂಬಂಧಪಟ್ಟ ಸ್ಥಳೀಯ ಗಣ್ಯರ ಸಹಭಾಗಿತ್ವದೊಂದಿಗೆ ಸ್ವಾಮಿ ವಿವೇಕಾನಂದರ 150ನೇ ಜಯಂತೋತ್ಸವವನ್ನು ಆಚರಣೆ ಮಾಡಲು ಸೂಚಿಸಲಾಗಿದೆ. ಇದನ್ನು ಒಳಗೊಂಡಂತೆ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿಯೂ ಸಹ ಈ ಮಹಾನ್ ಚೇತನದ 150ನೇ ಜಯಂತೋತ್ಸವವನ್ನು ಅತ್ಯಂತ ಶ್ರದ್ಧೆ ಹಾಗೂ ಭಾವಪೂರ್ಣವಾಗಿ ಆಚರಿಸುವ ಕುರಿತು ತುರ್ತು ಕ್ರಮವಹಿಸುವಂತೆ ತಮ್ಮನ್ನು ಕೋರಲು ನಿರ್ದೇಶಿತನಾಗಿದ್ದೇನೆ.

ತಮ್ಮ ನಂಬುಗೆಯ

{ ಎಸ್.ಬಿ.ಪಟಗಾರ್ }
ಸರ್ಕಾರದ ಅಧೀನಕಾರ್ಯದರ್ಶಿ
ಶಿಕ್ಷಣ ಇಲಾಖೆ[ಸಾಮಾನ್ಯ]